ಮಾರ್ಚ್ 2007ರ ವೇಳೆಗೆ ಪೂರ್ಣಗೊಳಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಕಾರಂಜಾ ಮೇಲ್ಭಾಗದ ಏತ ನೀರಾವರಿಯ 21 ಕಿ ಮೀ ಉದ್ದದ ಕಾಲುವೆಯು 19 ಕಿ ಮೀ ಗಳು ಪೂರ್ಣಗೊಂಡಿದ್ದು, ಉಳಿದ 2 ಕಿ ಮೀ ಕಾಮಗಾರಿಯನ್ನು ಮಾರ್ಚ್ 2007ರ ವೇಳೆಗೆ ಪೂರ್ಣಗೊಳಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಮೇಲೆ ಸೂಚಿಸಿದ ಬಾಕಿ ಕಾಮಗಾರಿಗಳನ್ನು ನಿಗದಿತ ವೇಳೆಯಲ್ಲಿ ಪೂರ್ಣಗೊಳಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿದೆ

ಈ) ಮತ್ತು ಉ) ಬೀದರ್ ಜಿಲ್ಲೆ ಮತ್ತು ಬೀದರ್ ತಾಲ್ಲೂಕಿನ ಸಂಗೊಳಗಿ ಪಾತರಪಳ್ಳಿ ಏತ ನೀರಾವರಿ ಯೋಜನೆಗೆ ವಾಸ್ತವವಾಗಿ ಕಾರಂಜಾ ಮೇಲ್ಭಾಗ ಏತ ನೀರಾವರಿ ಯೋಜನೆ ಹೆಸರಿಸಲಾಗಿದ್ದು, ಸದರಿ ಕಾಮಗಾರಿಗೆ ಇನ್‌ಟೇಕ್ ಚಾನಲ್, ಜಾಕ್‌ವೆಲ್, ರೈಸಿಂಗ್‌ಮೇನ್ ಮತ್ತು 19ರ ಕಾಲುವೆ ಕಾಮಗಾರಿಗಳು ಪೂರ್ಣಗೊಂಡಿರುತ್ತವೆ 2 ಕಿ ಮೀ ಗಳ ಕಾಲುವೆ ಕಾಮಗಾರಿಗಳನ್ನು ಮಾರ್ಚ್ 2007ರಲ್ಲಿ ಪೂರ್ಣಗೊಳಿಸುವ ಕಾರ್ಯಕ್ರಮವಿದೆ

516(869) ಶ್ರೀ ಮೀರಾಜುದ್ದೀನ್ ಪಟೇಲ್ (ಹುಮನಾಬಾದ್) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ಬಿಜಾಪುರದಲ್ಲಿ ದಿ 18 11 2006 ಹಾಗೂ 29 12 2006ರಂದು ಜರುಗಿದ ಸಿಂಡಿಕೇಟ್ ಸಭೆಗಳಲ್ಲಿ ಕುಲಸಚಿವರು ಹಾಗೂ ಸದಸ್ಯ ಕಾರ್ಯದರ್ಶಿಯಾದ ಐಎಫ್‌ಎಸ್ ಅಧಿಕಾರಿ ಅವರು ಸಭೆಯನ್ನು ಬಹಿಷ್ಕರಿಸಿ ಹೊರ ನಡೆದಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹೌದಾದಲ್ಲಿ ಸರ್ಕಾರ ಯಾವ ಕ್ರಮ ಜರುಗಿಸುವುದು,

ಆ) ಮಹಿಳಾ ವಿಶ್ವವಿದ್ಯಾಲಯ ಕುಲಸಚಿವರು ಸಿಂಡಿಕೇಟ್ ಹಾಗೂ ಕುಲಪತಿಗಳ ಅನುಮತಿ ಇಲ್ಲದೆ ಸರ್ಕಾರ ಹಾಗೂ ಘನತೆವೆತ್ತ ರಾಜ್ಯಪಾಲರು ಮತ್ತು ಕುಲಾಧಿಪತಿಗಳ ಕಛೇರಿಗೆ ನೇರವಾಗಿ ಪತ್ರ ವ್ಯವಹಾರ ಮಾಡುತ್ತಿರುವ ಸಂಗತಿ ತಿಳಿದಿದೆಯೇ, ಹೌದಾದಲ್ಲಿ ಸರ್ಕಾರ ಯಾವ ಕ್ರಮ ತೆಗೆದುಕೊಳ್ಳುವುದು,

ಇ) ಮಹಿಳಾ ವಿಶ್ವವಿದ್ಯಾಲಯ ಕುಲ ಸಚಿವರು, ಬಿಜಾಪುರ ಇವರು ನಾನು ರಾಷ್ಟ್ರಾಧ್ಯಕ್ಷರಿಂದ ನೇಮಕಗೊಂಡವನು ನನ್ನನ್ನು ಪ್ರಶ್ನಿಸುವ ಹಕ್ಕು ನಿಮಗಿಲ್ಲ ಎಂದು ಕುಲಪತಿಗಳಿಗೆ ಹಾಗೂ ಸಿಂಡಿಕೇಟ್ ಪ್ರಾಧಿಕಾರಕ್ಕೆ ಹೇಳಿ ಸಿಂಡಿಕೇಟ್ ಸಭೆಯಲ್ಲಿ ಅವಿಧೇಯತೆಯಿಂದ ವರ್ತಿಸಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ ಸರ್ಕಾರ ಯಾವ ಕ್ರಮ ಜರುಗಿಸುವುದು?

ಶ್ರೀ ಡಿ.ಎಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು):

ಅ) ಬಂದಿದೆ. ಈ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಆ) ಮತ್ತು ಇ) ಈ ಎಲ್ಲಾ ಅಂಶಗಳನ್ನು ಗಂಭೀರವಾಗಿ ಪರಿಶೀಲಿಸಲಾಗುತ್ತಿದ್ದು, ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

517(459) ಶ್ರೀ ನಾಗರಾಜು ಎಂ.ಟಿ.ಬಿ. (ಹೊಸಕೋಟೆ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) 2006-07ನೇ ಪ್ರಸಕ್ತ ಸಾಲಿನಲ್ಲಿ ಹೊಸಕೋಟೆ ತಾಲ್ಲೂಕಿಗೆ ಪ್ರೌಢಶಾಲೆಗಳನ್ನು ಮಂಜೂರು ಮಾಡಲು ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಯಾವ ಯಾವ ಸ್ಥಳದಲ್ಲಿ ಪ್ರೌಢಶಾಲೆ ಮಂಜೂರು ಮಾಡಲು ಕೋರಿಕೆ ಬಂದಿದೆ;

ಇ) ಈ ತಾಲ್ಲೂಕಿಗೆ ಪ್ರೌಢಶಾಲೆಗಳನ್ನು ಮಂಜೂರು ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಹೌದು.

ಆ) ಉಮ್ಮಲು

ಇ) 2006-07ನೇ ಸಾಲಿಗೆ ಹೊಸಕೋಟೆ ತಾಲ್ಲೂಕಿನ ದೊಡ್ಡಕೆಲ್ಲೂರು ಗ್ರಾಮಕ್ಕೆ ಹೊಸ ಸರ್ಕಾರಿ ಪ್ರೌಢಾಲೆಯನ್ನು ಮಂಜೂರು ಮಾಡಲಾಗಿದೆ.

518(690) ಶ್ರೀ ಜೆ. ನರಸಿಂಹಸ್ವಾಮಿ (ದೊಡ್ಡಬಳ್ಳಾಪುರ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ನೂತನವಾಗಿ ಮೂರು ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಈ ಹಿಂದೆ ತಾಂತ್ರಿಕ ಹಾಗೂ ಹಣಕಾಸು ಇಲಾಖೆಗಳ ಒಪ್ಪಿಗೆಗೆ ಕಳುಹಿಸಿದ್ದು ನಿಜವಲ್ಲವೇ;